# ಮಕ್ಕಳ ಕಾಯ್ದೆ ಅನುಷ್ಠಾನದಲ್ಲಿ ಮೂಲತತ್ವಗಳನ್ನು ಪಾಲಿಸಿ: ಶೇಖರಗೌಡ ರಮತ್ನಾಳ



ಕೊಪ್ಪಳ, ಮಾರ್ಚ್ 16 : ಮಕ್ಕಳಿಗೆ ಸಂಬಂಧಿಸಿದ ಕಾಯ್ದೆಗಳನ್ನು ಅನುಷ್ಠಾನಗೊಳಿಸುವಾಗ ಕಾಯ್ದೆಯ ಮೂಲತತ್ವಗಳನ್ನು ಪರಿಗಣಿಸಿ ಅನುಷ್ಠಾನಗೊಳಿಸಿ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯರಾದ ಶೇಖರಗೌಡ ಜಿ.ರಾಮತ್ನಾಳ ಅವರು ಹೇಳಿದರು. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುನಸೆಫ್–ಮಕ್ಕಳ ಸಂರಕ್ಷಣಾ ಯೋಜನೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಬ್ರೈಟ್ ಇಂಡಿಯಾ ಸೂಸೈಟಿ, ಕೊಪ್ಪಳ ಇವರುಗಳ ಸಂಯುಕ್ತಾಶ್ರಯದಲ್ಲಿ ಶನವಾರದಂದು ಜಿಲ್ಲಾ ನಗರಾಭಿವೃದ್ಧಿ ಪ್ರಾಧಿಕಾರದ ಸಭಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಗೆ ಭಾರತ ದೇಶವು ಸಹ ಅನುಮೋದಿಸಿದ್ದು, ಸರಕಾರ ಹಾಗೂ ಭಾರತ ಸಂವಿಧಾನದಲ್ಲಿ ಪ್ರದತ್ತವಾದ ಅಧಿಕಾರದನ್ವಯ ವಿಶೇಷ ಕಾಯ್ದೆಗಳನ್ನು ಜಾರಿಗೊಳಿಸಿದೆ. ಅವುಗಳಲ್ಲಿ ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015, ತಿದ್ದುಪಡಿ–2021, ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ತಿದ್ದುಪಡಿ–2019 ಇನ್ನೂ ಮುಂತಾದವುಗಳು ಜಾರಿಯಲ್ಲಿ ತಂದಿರುತ್ತದೆ. ಕಾಯ್ದೆಯ ಅನುಷ್ಠಾನದ ಸಂದರ್ಭದಲ್ಲಿ, ನಿರ್ಣಯಗಳನ್ನು ಕೈಗೊಳ್ಳುವ ಸಂದರ್ಭದಲ್ಲಿ ಮೂಲತತ್ವಗಳನ್ನು ಪರಿಗಣಿಸಿ ಅನುಷ್ಠಾನಗೊಳಿಸಿ ಎಂದು ಕಾಯ್ದೆಯಲ್ಲಿಯೇ ಹೇಳಿರುವ ಕಾಯ್ದೆ ಇದಾಗಿರುತ್ತದೆ ಎಂದು ಅವರು ಹೇಳಿದರು.

ಅಲ್ಲದೇ ಪೊಲೀಸ್ ಠಾಣೆಗಳು ಅಧಿಕಾರಿಗಳನ್ನು ಮಕ್ಕಳ ಸ್ನೇಹಿಯನ್ನಾಗಿಸಲು ಕಾಯ್ದೆಯಲ್ಲಿಯೇ "ಮಕ್ಕಳ ವಿಶೇಷ ಪೊಲೀಸ್ ಘಟಕಗಳನ್ನಾಗಿ ಹಾಗೂ ಪ್ರತಿ ಠಾಣೆಯಲ್ಲೂ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳನ್ನಾಗಿಸಿದೆ". ಕಾನೂನು ಸಂಘರ್ಷಕ್ಕೊಳಗಾದ ಹಾಗೂ ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳು ಅಥವಾ ಮಕ್ಕಳ ಪ್ರಕರಣಗಳು ನಮ್ಮ ಮುಂದೆ ಬಂದಾಗ, ಮಕ್ಕಳ ಸ್ನೇಹಿಯಾಗಿ ನಿರ್ವಹಿಸಿ. ಮಕ್ಕಳ ಮೇಲಿನ ಅಪರಾಧಗಳಿಗೂ ಸಹ ಶಿಕ್ಷೆಯನ್ನು ಈ ಕಾಯ್ದೆಯಡಿಯಲ್ಲಿ ನಿರೂಪಿತವಾಗಿವೆ ಹಾಗೂ ಮಿಷನ್ ವಾತ್ಸಲ್ಯ ಯೋಜನೆಯಡಿಯಲ್ಲಿ ಮಕ್ಕಳ ಸಹಾಯವಾಣಿ–1098ನ್ನು ತುರ್ತು ಪ್ರತಿಕ್ರಿಯೆ ಮತ್ತು ಬೆಂಬಲ ವ್ಯವಸ್ಥೆ (ಇ.ಆರ್.ಎಸ್.ಎಸ್)–112ರಡಿಯಲ್ಲಿ ತಂದಿದ್ದು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ನಿರ್ವಹಣೆಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ ಸಹಾಯಕ್ಕಾಗಿ ಮಕ್ಕಳ ಸಹಾಯವಾಣಿಗೂ ಸಹ ಕರೆ ಮಾಡಬಹುದಾಗಿದ್ದು, ಈ ಎರಡು ಘಟಕಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ಗಂಗಪ್ಪ ಮಾತನಾಡಿ, ಮಕ್ಕಳ ರಕ್ಷಣಾ ನಿರ್ದೇಶನಾಲಯದಡಿಯಲ್ಲಿನ ಸೇವೆಗಳು ಹಾಗೂ ಪೊಲೀಸ್ ಇಲಾಖೆ, ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015 ತಿದ್ದುಪಡಿ –2021ರ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ, ಮಕ್ಕಳ ರಕ್ಷಣೆಯನ್ನು ಸರಕಾರವು ಆದ್ಯತಾ ಮತ್ತು ತುರ್ತು ಸೇವೆ ಎಂದು ಗುರುತಿಸಿದೆ. ಕಾನೂನನೊಡನೆ ಸಂಘರ್ಷದಲ್ಲಿರುವ, ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ ಪುನರವಸತಿಗಾಗಿ ಸರಕಾರವು "ಮಿಷನ್ ವಾತ್ಸಲ್ಯ" ಯೋಜನೆಯನ್ನು ಜಾರಿಗೊಳಿಸಿದ್ದು, ಯೋಜನೆಯ ಸಾಂಸ್ಥಿಕ ಸೇವೆಗಳಡಿಯಲ್ಲಿ ಬಾಲಕರ, ಬಾಲಕಿಯರ ಬಾಲಮಂದಿರ ಹಾಗೂ ದತ್ತು ಸೇವಾ ಕೇಂದ್ರಗಳು, ಅಸಾಂಸ್ಥಿಕ ಸೇವೆಗಳಡಿಯಲ್ಲಿ ಪ್ರಾಯೋಜಕತ್ವ, ಪೋಷಕತ್ವ, ನಂತರದ ಸೇವೆಗಳನ್ನು ನೀಡಲಾಗುತ್ತಿದೆ. ಆದ್ದರಿಂದ ನಮ್ಮ ವ್ಯಾಪ್ತಿಯಲ್ಲಿ ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳು ಕಂಡುಬಂದಲ್ಲಿ ಅಂತಹ ಮಗುವನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಿ ಎಂದು ವಿವರಿಸಿದರು.

ಯುನಿಸೆಫ್–ಮಕ್ಕಳ ಸಂರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕರಾದ ಡಾ. ಕೆ. ರಾಘವೇಂದ್ರ ಭಟ್ ಅವರು ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015 ತಿದ್ದುಪಡಿ–2021ರ ಹಾಗೂ ಮಿಷನ್ ವಾತ್ಸಲ್ಯ ಕುರಿತು, ಯುನಿಸೆಫ್–ಮಕ್ಕಳ ಸಂರಕ್ಷಣಾ ಯೋಜನೆಯ ವ್ಯವಸ್ಥಾಪಕರಾದ ಹರೀಶ್ ಜೋಗಿ ಅವರು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯ್ದೆ–2012 ಮತ್ತು ತಿದ್ದುಪಡಿ–2019ರ ಕುರಿತು ತರಬೇತಿಯನ್ನು ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳ ಸಹಾಯಕ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳು, ಶಿವಲೀಲಾ ವನ್ನೂರು, ಪ್ರತಿಭಾ ಕಾಶಿಮಠ, ಮಹಾಂತಸ್ವಾಮಿ ಪೂಜಾರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಪ್ರಶಾಂತ ರಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಲೋಕಸಭಾ ಚುನಾವಣೆ –2024 : ಗದಗ ಜಿಲ್ಲಾಡಳಿತ ಸಕಲ ಸಿದ್ಧತೆ

(1 ನೇ ಪುಟದಿಂದ)

ಕಾಲ್ ಸೆಂಟರ್ ಹಾಗೂ ಜಿಲ್ಲಾ ಕಂಟ್ರೋಲ್ ರೂಂ ಕಾರ್ಯನಿರ್ವಹಿಸುತ್ತವೆ.

ಮತದಾರರ ವಿವರ: ಇದುವರೆಗೆ ಜಿಲ್ಲೆಯಲ್ಲಿ 4,40,927 ಪುರುಷ ಮತದಾರರು, 4,42,647 ಮಹಿಳಾ ಮತದಾರರು, 60 ಇತರೆ ಮತದಾರರ ಹೀಗೆ ಒಟ್ಟು 8,83,634 ಮತದಾರರು ಇರುತ್ತಾರೆ. ಜಿಲ್ಲೆಯಲ್ಲಿ ಈವರೆಗೆ 18–19 ವಯೋಮಾನದ ಒಟ್ಟು 23665 ಯುವ ಮತದಾರರ ಹೆಸರುಗಳನ್ನು ಸೇರ್ಪಡೆಗೊಂಡಿರುತ್ತವೆ. ಜಿಲ್ಲೆಯಲ್ಲಿ ಈವರೆಗೆ 11897 ದಿವ್ಯಾಂಗ ಚೇತನರು ಮತದಾರ ಪಟ್ಟಿಯಲ್ಲಿ ನೋಂದಾಯಿಸಿಕೊಂಡಿರುತ್ತಾರೆ. ಅದೇರೀತಿ, 85 ವರ್ಷ ವಯೋಮಿತಿ ಮೀರಿದ ಹಿರಿಯ ನಾಗರೀಕರು 5747 ಜನ ಮತದಾರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಂಡಿರುತ್ತಾರೆ.

ಮತಗಟ್ಟೆ ವಿವರ: ಜಿಲ್ಲೆಯಲ್ಲಿ ಒಟ್ಟು 961 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಈ ಪೈಕಿ 65–ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 251, 66–ಗದಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 223, 67–ರೋಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 267 ಹಾಗೂ 68–ನರಗುಂದ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 220 ಮತಗಟ್ಟೆಗಳು ಬರುತ್ತವೆ.

ಚುನಾವಣಾ ವೇಳಾಪಟ್ಟಿ : ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಎಪ್ರಿಲ್ 12 ರಂದು ಅಧಿಸೂಚನೆ ಹೊರಡಿಸಲಾಗುವುದು. ನಾಮಪತ್ರ ಸಲ್ಲಿಕೆಗೆ ಎಪ್ರಿಲ್ 19 ಕೊನೆಯ ದಿನವಾಗಿದೆ. ಎಪ್ರಿಲ್ 20 ರಂದು ನಾಮಪತ್ರಗಳ ಪರಿಶೀಲನೆ ಜರುಗಲಿದ್ದು, ಎಪ್ರಿಲ್ 22 ರಂದು ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನವಾಗಿದೆ. ಮೇ 7 ರಂದು ಮತದಾನ ಜರುಗಲಿದ್ದು, ಜೂನ್ 4 ರಂದು ಮತ ಎಣಿಕೆ ನಡೆಯಲಿದೆ. ಚುನಾವಣಾ ಪ್ರಕ್ರಿಯೆ ಜೂನ್ 6 ರಂದು ಕೊನೆಗೊಳ್ಳಲಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಕಾನೂನು ಸುವ್ಯವಸ್ಥೆ ಹಾಗೂ ಶಾಂತಿಯುತ ಮತದಾನ ನಡೆಯುವಂತಾಗಲು ಹಾವೇರಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಶಿರಹಟ್ಟಿ, ಗದಗ ಹಾಗೂ ರೋಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 10 ಚೆಕ್ ಪೊ?ಸ್ಟ್ ಗಳನ್ನು ಹಾಗೂ ಬಾಗಲಕೋಟೆ ಲೋಕಸಭಾ ಕ್ಷೇತ್ರದ ನರಗುಂದ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2 ಚೆಕ್ ಪೊ?ಸ್ಟ್ ಗಳನ್ನು ತೆರೆಯಲಾಗಿದ್ದು, 24/7 ಕೆಲಸ ನಿರ್ವಹಿಸಲು ಕ್ರಮ ಜರುಗಿಸಲಾಗಿದೆ.

ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ಶಾಂತಿಯು ಮತದಾನವಾಗಲು ಮುಂಜಾಗ್ರತಾ ಕ್ರಮವಾಗಿ ಗೂಂಡಾ ಹಾಗೂ ರೌಡಿಗಳ ಗಡಿಪಾರಿಗೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಅಲ್ಲದೇ, ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ 1500 ಸಿಬ್ಬಂದಿಯುನ್ನು ನಿಯೋಜಿಸಲಾಗಿದೆ ಎಂದು ವಿವರಿಸಿದರು. ಜಿಲ್ಲಾ ಪಂಚಾಯತ ಸಿಇಓ ಭರತ್ ಎಸ್. ಮಾತನಾಡಿ, ಈಗಾಗಲೇ ಮಾದರಿ ನೀತಿ ಸಂಹಿತೆ ಜಾರಿಯಾಗಿದ್ದು, ಚುನಾವಣಾ ಪ್ರಚಾರ ಸಭೆ ವೀಕ್ಷಣೆ, ಮಾದರಿ ಸಂಹಿತೆ ಪಾಲನೆ ಕುರಿತು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 9 ರಂತೆ ಒಟ್ಟು 36 ಸಂಚಾರಿ ದಳಗಳನ್ನು, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 3ರಂತೆ ಒಟ್ಟು 12 ವಿಡಿಯೋ ಕಣ್ಗಾವಲು ತಂಡಗಳನ್ನು, ಹಾಗೂ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ ಒಂದರಂತೆ 4 ವಿಡಿಯೋ ವೀಕ್ಷಣಾ ತಂಡಗಳನ್ನು ರಚಿಸಲಾಗಿದೆ ಎಂದರು. ಜಿಲ್ಲೆಯ ಯಾವುದೇ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಾದರಿ ನೀತಿ ಸಂಹಿತೆ ಪಾಲನೆಯಾಗದಿದ್ದಲ್ಲಿ, ದೂರುಗಳಿದ್ದಲ್ಲಿ ಸಾರ್ವಜನಿಕರ 1950 ಟೋಲ್ ಫ್ರೀ ನಂಬರ್ ಗೆ ಕರೆ ಮಾಡಿ ದೂರು ನೀಡಬಹುದು. ಇಲ್ಲವಾದಲ್ಲಿ ಸಿ–ವಿಜಿಲ್ ಆಪ್ ನಲ್ಲೂ ದೂರು ದಾಖಲಿಸಬಹುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಹಾಜರಿದ್ದರು.

# ಕೃತಕ ಬುದ್ಧಿವಂತಿಕೆ ಹಾಗೂ ಅಂತರ್ಜಾಲ ಪ್ರಯೋಗಾಲಯದ ಉದ್ಘಾಟನೆ



ಗದಗ ಮಾರ್ಚ 16: ಎಸ್.ಎಂ.ಕೆ. ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 12 ರಲ್ಲಿ ರಾಜ್ಯದ ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ.ಪಾಟೀಲ ಅವರು ಶನವಾರದಂದು ಕೃತಕ ಬುದ್ಧಿವಂತಿಕೆ ಹಾಗೂ ಅಂತರ್ಜಾಲ ಪ್ರಯೋಗಾಲಯ ಮತ್ತು ಗೌರವ ಘಟಕವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಬಸವರಾಜ ಕಡೆಮನಿ, ಲಕ್ಷ್ಮೀ ಸಿದ್ದಮ್ಮನಹಳ್ಳಿ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರುಡಿ, ಮುಖ್ಯೋಪಾಧ್ಯಾಯರಾದ ಎಸ್.ಸಿ. ನಾಗರಹಳ್ಳಿ, ಎಚ್.ಆರ್. ಕೋನೆಮನಿ, ವಿವಿಧ ಗಣ್ಯರು, ಹಿರಿಯರು ಹಾಜರಿದ್ದರು.

# ಕೃತಕ ಬುದ್ಧಿಮತ್ತೆಯನ್ನು ಎಚ್ಚರಿಕೆಯಿಂದ ಬಳಸಿ:

(1 ನೇ ಪುಟದಿಂದ)

ಆದ್ದರಿಂದ ಅವುಗಳಿಂದ ಸರಿಯಾದ ಉತ್ತರ ನಿರೀಕ್ಷಿಸಲಾಗುವುದಿಲ್ಲ. ಇಂದು ಸಿದ್ಧ ಮಾದರಿಯ ಧ್ವನಿಗಳಿಂದ ಸಿಗುವ ಮಾಹಿತಿ ಅಪೂರ್ಣವಾಗಿರುತ್ತದೆ. ಈ ಬಗ್ಗೆ ಜಾಗತಿಕ ಮಟ್ಟದಲ್ಲಿ ಹೋರಾಟ ಆರಂಭವಾಗಿದೆ. ಆದ್ದರಿಂದ ಗ್ರಾಹಕರು ಜವಾಬ್ದಾರಿಯುತವಾಗಿ ಕೃತಕ ಬುದ್ಧಿಮತ್ತೆಯನ್ನು ಬಳಸಬೇಕು. ಬಳಕೆದಾರ ಯಾವುದೇ ವಸ್ತುಗಳನ್ನು ಖರೀದಿಸುವ ಮುಂಚೆ ಆ ವಸ್ತುವಿನ ಬಗ್ಗೆ ತಿಳಿದುಕೊಳ್ಳುವುದು ಬಹಳ ಮುಖ್ಯ. ಇಂದು ರಾಜ್ಯದಲ್ಲಿ ಗೋಬಿ, ಕಾಟನ್ ಕ್ಯಾಂಡಿ ಮತ್ತು ಇತರೆ ಆಹಾರಪದಾರ್ಥಗಳಲ್ಲಿ ಕೃತಕ ಬಣ್ಣ ಮತ್ತು ರಾಸಾಯನಿಕ ಬಳಕೆಯನ್ನು ನಿಷೇಧಿಸಲಾಗಿದೆ. ಇದರ ಬಳಕೆ ಕಂಡುಬಂದಲ್ಲಿ ಗ್ರಾಹಕರು ಜಿಲ್ಲಾ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಗೆ ದೂರು ಕೊಡಬಹುದು ಹಾಗೂ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೂ ದೂರು ನೀಡಿ ನ್ಯಾಯ ಪಡೆಯಬಹುದು ಎಂದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯೆ ಜಿ.ಇ.ಸೌಭಾಗ್ಯ ಲಕ್ಷ್ಮೀ ಗ್ರಾಹಕರ ಹಕ್ಕುಗಳು, ಜವಾಬ್ದಾರಿ ಹಾಗೂ ಪರಿಹಾರ ಕುರಿತು ಮಾತನಾಡಿದರು. ಐದರಿಂದ ಐವತ್ತು ಲಕ್ಷಗಳವರೆಗೂ ಪರಿಹಾರ ಪಡೆಯಬಹುದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎಂ.ಜಿ.

ಮಾಲ್ದಾರ್ ಅವರು, ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರ ಕೊಡುತ್ತ ಸಂವಾದ ನಡೆಸಿದರು. ಕಾನೂನು ಪರಿಹಾರಗಳನ್ನು ಮತ್ತು ಸಲಹೆಗಳನ್ನು ನೀಡಿದರು.

ಕೊಪ್ಪಳ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಕೆ.ವಿ.ಪ್ರಸಾದ ಅವರು ಕೃತಕ ಬುದ್ಧಿಮತ್ತೆಯ ಬಗ್ಗೆ ವಿದ್ಯಾರ್ಥಿಗಳಿಗೆ ಪರಿಣಿತರಿಂದ ಮಾರ್ಗದರ್ಶನ ಮತ್ತು ಉಪಯುಕ್ತ ಮಾಹಿತಿಗಳನ್ನು ತಿಳಿದುಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಆಹಾರ ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ಅನ್ನಪೂರ್ಣ ಮುದುಕಮ್ಮನವರ, ಇಲಾಖೆಯ ಅಧಿಕಾರಿಗಳಾದ ದೇವರಾಜ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಕೃಷ್ಣ, ಬಕ್ರುದ್ದಿನ್, ಪ್ರೊ. ಸುಧಾಕರ, ಪ್ರೊ. ಪ್ರವೀಣ ಪೊಲೀಸ್ ಪಾಟೀಲ ಸೇರಿದಂತೆ ವಿದ್ಯಾರ್ಥಿಗಳು, ಇತರರು ಉಪಸ್ಥಿತರಿದ್ದರು.

# ಲೋಕಸಭಾ ಚುನಾವಣೆಯ ವೇಳಾಪಟ್ಟಿ ಪ್ರಕಟ: ಡಿಸಿ ಎಂ.ಎಸ್.ದಿವಾಕರ



ಹೊಸಪೇಟೆ (ವಿಜಯನಗರ) ಮಾರ್ಚ 16 (ಕ.ವಾ): ಭಾರತ ಚುನಾವಣಾ ಆಯೋಗವು 2024ರಲ್ಲಿ ಜರುಗಲಿರುವ ಸಾರ್ವತ್ರಿಕ ಲೋಕಸಭಾ ಚುನಾವಣೆಯ ದಿನಾಂಕ ನಿಗದಿಪಡಿಸಿ ಅಧಿಸೂಚನೆಯನ್ನು ಹೊರಡಿಸಿ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಾರ್ಚ 16ರಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಸಾರ್ವತ್ರಿಕ ಲೋಕಸಭಾ ಚುನಾವಣೆಯು ಮೇ 7 ರಂದು ನಡೆಯಲಿದ್ದು, ಜೂನ್ 04ರಂದು ಮತಎಣಿಕೆ ನಡೆಯಲಿದೆ. ಚುನಾವಣಾ ನೀತಿ ಸಂಹಿತೆಯು ಮಾರ್ಚ 16 ರಿಂದ ರಾಜ್ಯಾದ್ಯಂತ ಜಾರಿಯಲ್ಲಿರುತ್ತದೆ ಎಂದು ತಿಳಿಸಿದರು.

ಏಪ್ರಿಲ್ 12ರಂದು ಅಧಿಸೂಚನೆ ಹೊರಡಿಸಲಾಗುವುದು. ಏಪ್ರಿಲ್ 19ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನಾಂಕವಾಗಿದೆ. ಏಪ್ರಿಲ್ 20ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಏಪ್ರೀಲ್ 22 ಕೊನೆಯ ದಿನವಾಗಿರುತ್ತದೆ. ಮೇ 7ರಂದು ಮತದಾನವು ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೆ ನಡೆಯಲಿದೆ. ಜೂನ್ 4ರಂದು ಮತ ಎಣಿಕೆ ನಡೆಯಲಿದೆ. ಜೂನ್ 6ರಂದು ಚುನಾವಣೆ ಪ್ರಕ್ರಿಯೆಯು ಸಂಪೂರ್ಣ ಪೂರ್ಣಗೊಳ್ಳಲಿದೆ ಎಂದು ಅವರು ತಿಳಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಕೂಡ್ಲಿಗಿ, ಹಡಗಲಿ, ಹಗರಿಬೊಮ್ಮನಹಳ್ಳಿ, ವಿಜಯನಗರ ಕ್ಷೇತ್ರಗಳು ಮತ್ತು ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ಸೇರಿ ಒಟ್ಟು 1234 ಮತಗಟ್ಟೆಗಳ ವ್ಯಾಪ್ತಿಯಲ್ಲಿ 5,57,385 ಪುರುಷರು ಹಾಗೂ 5,61,017 ಮಹಿಳೆಯರು ಮತ್ತು ಇತರೆ 141 ಸೇರಿ ಒಟ್ಟು 11,18,543 ಮತದಾರರು ಇದ್ದಾರೆ.

15,714 ಯುವಕರು ಮತ್ತು 13,282 ಯುವತಿಯರು ಮತ್ತು ಇತರೆ ಓರ್ವರು ಸೇರಿ ಒಟ್ಟು 28,997 18–19 ವಯೋಮಾನದ ಮತದಾರರು ಇದ್ದಾರೆ. 2456 ಪುರುಷರು ಮತ್ತು 4239 ಮಹಿಳೆಯರು ಸೇರಿ ಒಟ್ಟು 6695ರಷ್ಟು 80+ ವಯೋಮಾನದ ಮತದಾರರಿದ್ದಾರೆ. 8674 ಪುರುಷರು ಮತ್ತು 7184 ಮಹಿಳೆಯರು ಮತ್ತು ಇತರೆ ಐವರು ಸೇರಿ ಒಟ್ಟು 15,863 ವಿಕಲಚೇತನ ಮತದಾರರಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಮತದಾರರ ಮಾಹಿತಿ ನೀಡಿದರು.

ಬಳ್ಳಾರಿ ಎಸ್.ಟಿ ಮೀಸಲು ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 14 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ. ಪ್ರತಿ ಚೆಕ್‌ಪೋಸ್ಟ್‌ಗಳಲ್ಲಿ ಮೂವರು ಸ್ಟ್ಯಾಟಿಕ್ ಸರ್ವೆಲನ್ಸ್ ತಂಡದ ಅಧಿಕಾರಿಗಳು ಹಾಗೂ ಪೊಲೀಸ್ ಸಿಬ್ಬಂದಿ ನೇಮಿಸಲಾಗಿದೆ.

ಅದರಂತೆ ಪ್ರತಿ ಮತಕ್ಷೇತ್ರಕ್ಕೆ ಎಫ್‌ಎಸ್‌ಸಿ ಕೂಡ ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರವಾಸಿ ಮಂದಿರಗಳಲ್ಲಿ ರಾಜಕೀಯ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಪ್ರವಾಸಿ ಮಂದಿರಗಳನ್ನು ರಾಜಕೀಯ ಪ್ರೇರಿತ ವ್ಯಕ್ತಿಗಳಿಗೆ ಹಾಗೂ ಮುಖಂಡರಿಗೆ ನೀಡದಂತೆ ಹಾಗೂ ಸದರಿ ಪ್ರವಾಸಿ ಮಂದಿರಗಳನ್ನು ತಮ್ಮ ವಶಕ್ಕೆ ಪಡೆದುಕೊಳ್ಳಲು ಸ್ಥಳೀಯ ಆಡಳಿತಕ್ಕೆ ಸೂಚಿಸಲಾಗಿದೆ.

ಎಲ್ಲಾ ಚುನಾಯಿತರಾದ ಹಾಗೂ ನಾಮ ನಿರ್ದೇಶಿತಗೊಂಡ ರಾಜಕೀಯ ಮುಖಂಡರಿಗೆ ನೀಡಲಾಗಿರುವ ಸರ್ಕಾರಿ ವಾಹನ ಸೌಲಭ್ಯವನ್ನು ಅಧಿಗ್ರಹಣದ ಮೂಲಕ ಮರಳಿ ಪಡೆದು ಜಿಲ್ಲಾಡಳಿತದ ಅಧೀನದಲ್ಲಿ ಇಟ್ಟುಕೊಳ್ಳಲಾಗಿದೆ. ಚುನಾಯಿತ ಹಾಗೂ ನಾಮ ನಿರ್ದೇಶಿತಗೊಂಡಿರುವ ಅಧಿಕಾರೇತರ ಸದಸ್ಯರ ಚೇಂಬರ್‌ಗಳನ್ನು ಮುಚ್ಚಿಸಿ ಸೀಲ್ ಮಾಡಲು ಸೂಚಿಸಲಾಗಿದೆ.

ಜಿಲ್ಲೆಯಾದ್ಯಂತ ಮತದಾರರಿಗೆ ಪ್ರಭಾವಕ್ಕೊಳಪಡುವ ರಾಜಕೀಯ ಸಭೆ, ಸಮಾರಂಭಗಳನ್ನು ನಿಷೇಧಿಸಲಾಗಿದೆ. ಒಂದು ವೇಳೆ ಯಾವುದೇ ಸಭೆ ಸಮಾರಂಭಗಳು ಅವಶ್ಯಕವಿದ್ದಲ್ಲಿ ಚುನಾವಣಾಧಿಕಾರಿಗಳ ಪರವಾನಗೆ ಪಡೆದ ನಂತರವೇ ಕಾರ್ಯಕ್ರಮ ಆಯೋಜಿಸಬೇಕೆಂದು ಸಾರ್ವಜನಕರಿಗೆ ತಿಳಿಸಲಾಗಿದೆ ಎಂದರು.

**ಸಾರ್ವಜನಕರಲ್ಲಿ ಮನವಿ:** ಲೋಕಸಭಾ ಸಾರ್ವತ್ರಿಕ ಚುನಾವಣೆಯ ಹಿನ್ನೆಲೆಯಲ್ಲಿ ಮಾರ್ಚ 16 ರಿಂದಲೇ ಚುನಾವಣಾ ಮಾದರಿ ನೀತಿ ಸಂಹಿತೆಯು ರಾಜ್ಯಾದ್ಯಂತ ಜಾರಿಯಲ್ಲಿರುತ್ತದೆ. ಈ ಚುನಾವಣೆಯ ಮಾದರಿ ನೀತಿ ಸಂಹಿತೆಯು ಕಟ್ಟುನಿಟ್ಟಾಗಿ ಪಾಲಿಸುವಲ್ಲಿ ಜಿಲ್ಲಾಡಳಿತವು ಎಲ್ಲಾ ಅಗತ್ಯಕ್ರಮ ಜರುಗಿಸಲಾಗಿದೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯು ಒಂದು ಅತ್ಯಂತ ಮಹತ್ವಪೂರ್ಣ ಹಾಗೂ ಪವಿತ್ರ ಕಾರ್ಯವಾಗಿದೆ. ಈ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ನಿಸ್ಪಕ್ಷಪಾತವಾಗಿ ಜರುಗುವಲ್ಲಿ ಪ್ರತಿಯೊಬ್ಬ ನಾಗರೀಕರು ಹಾಗೂ ಎಲ್ಲಾ ರಾಜಕೀಯ ಪಕ್ಷದವರು ಹಾಗೂ ಅಧಿಕಾರಿ ವರ್ಗದವರು ಸಕಾರಾತ್ಮಕವಾಗಿ ಕಾರ್ಯನಿರ್ವಹಿಸಿ ದೋಷರಹಿತವಾಗಿರುವಂತಹ ಚುನಾವಣೆಯನ್ನು ಯಶಸ್ವಿಯಾಗಿ ನಿರ್ವಹಿಸುವಲ್ಲಿ ಎಲ್ಲರೂ ತಮ್ಮ ಜವಾಬ್ದಾರಿಯನ್ನು ಅರಿತು ಅದಕ್ಕನುಗುಣವಾಗಿ ಕಾರ್ಯನಿರ್ವಹಿಸಿ ಸಹಕರಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸದಾಶಿವ ಪ್ರಭು ಬಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿಬಾಬು, ಅಪರ ಜಿಲ್ಲಾಧಿಕಾರಿ ಅನುರಾಧ ಜಿ ಇದ್ದರು.

# ಬೆಳಗಾವಿ ಬುಡಾ ಅಧ್ಯಕ್ಷರಾಗಿ ಲಕ್ಷ್ಮಣರಾವ್ ಚಿಂಗಳೆ



ಬೆಳಗಾವಿ: ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಆಶೀರ್ವಾದದಿಂದ ಬೆಳಗಾವಿ ಬುಡಾ ಅಧ್ಯಕ್ಷನಾಗಿ ಅಧಿಕಾರ ಸ್ವೀಕರಿಸಿದ್ದು, ಬೆಳಗಾವಿ ನಗರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ನೂತನ ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ತಿಳಿಸಿದರು.

ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರಿಂದ ಬುಡಾ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರ ಸಹಕಾರದಿಂದ ಬೆಳಗಾವಿ ಬುಡಾ ಅಧ್ಯಕ್ಷನಾಗಿ ಆಯ್ಕೆಯಾಗಿದ್ದು ಸಂತಸ ತಂದಿದೆ ಎಂದರು.

ಇದೇ ವೇಳೆ ಬೆಳಗಾವಿ ಬುಡಾ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಲಕ್ಷ್ಮಣರಾವ್ ಚಿಂಗಳೆ ಅವರನ್ನು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಪುಷ್ಪಗುಚ್ಛ ನೀಡಿ ಸತ್ಕರಿಸಿದರು.ಶುಕ್ರವಾರ ಲಕ್ಷ್ಮಣರಾವ್ ಚಿಂಗಳೆ ಅವರನ್ನು ಬುಡಾ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಮುಖ್ಯಮಂತ್ರಿ ಸಿದ್ರಾಮಯ್ಯ ಆದೇಶ ಹೊರಡಿಸಿದ್ದರು. ಈ ಸಂದರ್ಭದಲ್ಲಿ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲಾಧಿಕಾರಿ ನಿತೇಶ್ ಪಾಟೀಲ್, ಬೆಳಗಾವಿ ಗ್ರಾಮೀಣ ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಎಂ.ಜೆ, ರಾಜಾ ಸಲೀಂ, ಮಹಾವೀರ್ ಮೋಹಿತೆ ಸೇರಿದಂತೆ ಹಲವು ಕಾಂಗ್ರೆಸ್ ಕಾರ್ಯಕರ್ತರು ಹಾಜರಿದ್ದರು.

# ಕರಾಬು ಎಂದು ನಮೂದಿಸುವ ಮೂಲಕ ರೈತರನ್ನು ಬೀದಿಗೆ ತಳ್ಳಿದ್ದು ತಕ್ಷಣ ಕ್ರಮವಹಿಸಿ: ಧರ್ಮನಾಯ್ಕ



ಸಂಡೂರು:ಮಾ: 16: ತಾಲೂಕಿನ ಸುಶೀಲಾನಗರ, ದೌಲತ್‌ಪುರ, ಧರ್ಮಾಪುರ, ಕೃಷ್ಣಾನಗರ, 14 ಹಳ್ಳಿಗಳ ಸರ್ವೇ ಸೆಟ್ಲಮೆಂಟ್ ಮಾಡಿದ ಸಂದರ್ಭದಲ್ಲಿ ರೈತರ ಜಮೀನುಗಳನ್ನು ಕರಾಬು, ಬಿ.ಕರಾಬು ಎಂದು ನಮೂದಿಸುವ ಮೂಲಕ ರೈತರ ಜಮೀನುಗಳಲ್ಲಿ ಕೃಷಿಮಾಡದಂತಹ ಸ್ಥಿತಿ ಉಂಟಾಗಿದ್ದು ತಕ್ಷಣ ನಿಜವಾದ ಸರ್ವೇ ಮಾಡುವ ಮೂಲಕ ರೈತರ ಜಮೀನುಗಳ ಆಧಾರಗಳನ್ನು ಪರಿಶೀಲಿಸಿ ಅವರಿಗೆ ಹಕ್ಕು ಪತ್ರಗಳನ್ನು ಕೊಡಬೇಕು ಎಂದು ರೈತ ಸಂಘದ ಅಧ್ಯಕ್ಷ ಧರ್ಮಾನಾಯ್ಕ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಾಲೂಕಿನ 14 ಹಳ್ಳಿಗಳ ರೈತರು ಪಟ್ಟಣದ ವಿಜಯ ವೃತ್ತದಲ್ಲಿ ಬೃಹತ್ ಪ್ರತಿಭಟನಾ ಮೆರವಣ ಗೆಯನ್ನು ಮಾಡಿ ತಹಶೀಲ್ದಾರ್ ಅನಿಲ್ ಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಿದರು ಈ ಸಂದರ್ಭದಲ್ಲಿ ದೌಲತ್‌ಪುರ ಗ್ರಾಮದ ಮುಖಂಡರಾದ ಶ್ರೀಪಾದ ಸ್ವಾಮಿ ಮಾತನಾಡಿ 30–40 ವರ್ಷಗಳಿಂದಲೂ ಕೃಷಿ ಮಾಡುತ್ತಿರುವ ರೈತರ ಭೂಮಿಗಳನ್ನು ಕೆರೆ ಹಳ್ಳ, ಬಿಟ್ಟು ಫಾರಂ 2 ಅಡಿಯಲ್ಲಿ ಕೃಷಿ ಜಮೀನು ಎಂದು ನೀಡಿರುತ್ತೀರಿ, ಅದರೆ ಈಗ ಖರಾಬು ಎಂದು ನಮೂದಿಸಿರುವುದು ರೈತರು ಬೀದಿಪಾಲಾಗುತ್ತಿದ್ದಾರೆ ಅದನ್ನು ತಕ್ಷಣ ಪರಿಶೀಲನೆ ಮಾಡುವ ಮೂಲಕ ಕ್ರಮ ವಹಿಸಬೇಕು, ತಾಲೂಕಿನ ಸುಶೀಲಾನಗರ ಗ್ರಾಮದಲ್ಲಿ 234 ಎಕರೆ, ಸಿದ್ದಾಪುರ ಗ್ರಾಮದಲ್ಲಿ 300 ಎಕರೆ 18ಹುಲಿಕುಂಟೆ ಗ್ರಾಮಗಳಲ್ಲಿ ಯೂ ಸಹ ಬಹಳಷ್ಟು ಜಮೀನುಗಳು ಇಲ್ಲವಾಗುತ್ತಿವೆ ಅದ್ದರಿತಹಶೀಲ್ದಾರ್ ಹಾಗೂ ಇತರ ಅಧಿಕಾರಿಗಳು ಪರಿಶೀಲನೆ ಮಾಡುವ ಮೂಲಕ ರೈತರಿಗೆ ಹಿಂದಿನಂತೆಕ ಪಾಣ ಗಳಲ್ಲಿ ಹೆಸರು ಬರಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಾಲೂಕಿನ ಯಶವಂತನಗರ ಗ್ರಾಮದ ರೈತ ಮುಖಂಡ ರಾಜಶೇಖರಗೌಡ ಮಾತನಾಡಿ ರೈತ ಜಮೀನುಗಳಲ್ಲಿ ಅದಿರು ಲಾರಿಗಳ ಸಂಚಾರ ಮಾಡುತ್ತಿವೆ, ಅಲ್ಲದೆಕ ತಿಮ್ಮಪ್ಪನಗುಡಿ ದೇವರ ದರ್ಶನಕ್ಕೆ, ರೈತರು ತಮ್ಮ ಕೃಷಿ ಭೂಮಿಗೆ ಓಡಾಡುವುದು ಸಹ ದುಸ್ತರವಾಗಿದೆ, ಅದ್ದರಿಂದ ತಕ್ಷಣ ತಹಶೀಲ್ದಾರ್ ಅವರು ಪರಿಶೀಲನೆ ಮಾಡಿ ಅದಿರು ಲಾರಿಗಳಿಗೆ ನೀಡಿರುವ ರಸ್ತೆಯ ಬಗ್ಗೆ ಕ್ರಮ ವಹಿಸಿ ರೈತರಿಗೆ ರಸ್ತೆ ಬಿಡಿಸಿಕೊಡಬೇಕು, ಒಂದಲ್ಲ ಒಂದು ರೀತಿಯಲ್ಲಿ ರೈತರು ಕೃಷಿ ಮಾಡದಂತಹ ದುಸ್ಥಿತಿ ಉಂಟಾಗಿದ್ದು ತಕ್ಷಣ ರೈತರನ್ನು ರಕ್ಷಿಸಬೇಕು ಅವರ ಬೇಡಿಕೆಗಳನ್ನು ಈಡೇರಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕಿನ್ನೂರೇಶ್ವರ, ರಾಮನಾಯ್ಕ, ಭಾಷಾ, ಸೋಮಣ್ಣ, ಕಾಗಪ್ಪ, ಫಕ್ರು, ಕೆ.ಜಂಜಪ್ಪ, ದೊಡ್ಡಬಸಪ್ಪ, ವಸಗೇರಪ್ಪ, ಚೌಡಪ್ಪ, ಕಾಗಪ್ಪ, ಮೊದನ್ ಸಾಬ್, ಹನುಮಂತಪ್ಪ, ಬಿ.ರಾಜಣ್ಣ, ಶ್ರೀನಿವಾಸ ಹಾಗೂ ಇತರರು ಉಪಸ್ಥಿತರಿದ್ದು ತಹಶೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

# ಹುಣಸೆಹಣ್ಣಿನ ಬಹಿರಂಗ ಹರಾಜು

ವಿಜಯಪುರ ಮಾ.16 : ವಿಜಯಪುರ ಕೇಂದ್ರ ಕಾರಾಗೃಹದ ತೋಟದ ವಿಭಾಗದಲ್ಲಿರುವ ಹುಣಸೆಹಣ್ಣಿನ ಬಹಿರಂಗ ಹರಾಜು ಪ್ರಕ್ರಿಯೆ ಮಾ.27ರಂದು ಬೆಳಗ್ಗೆ 11 ಗಂಟೆಗೆ ನಡೆಯಲಿದೆ. ಆಸಕ್ತರು ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಾರಾಗೃಹದ ಅಧೀಕ್ಷಕ ಕಾರ್ಯಾಲಯ (9480806490)ನ್ನು ಸಂಪರ್ಕಿಸಬಹುದು ಎಂದು ಕೇಂದ್ರ ಕಾರಾಗೃಹದ ಅದೀಕ್ಷಕರಾದ ಡಾ. ಐ.ಜೆ. ಮ್ಯಾಗೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.